## ದಿನಾಂಕ: 25/08/2021 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ-109 ಚಿಕ್ಕಪೇಟೆ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

| ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು: | | | ಗೈರು ಹಾಜರಿದ್ದ ಇಲಾಖೆ ಸಿಬ್ಬಂಧಿಗಳು |
|---|---|---|---|
| ಕ್ರ.ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ | |
| 1 | ಶ್ರೀ. ಎಂ.ಎಸ್. ಉಮೇಶ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ | BWSSB |
| 2 | ಶ್ರೀ. ಮೋಹನ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-109 | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) |
| 3 | ಶ್ರೀ. ಚೇತನ್ ಕುಮಾರ್.ಕೆ.ವಿ | ಸಹಾಯಕ ಅಭಿಯಂತರರು (ಬೆಸ್ಕಾಂ) | ಆರೋಗ್ಯ ವೈಧ್ಯಾಧಿಕಾರಿಗಳು |
| 4 | ಶ್ರೀ. ನಟರಾಜು | ಎ.ಎ.ಪಿ, ಚಾಮರಾಜಪೇಟೆ | ಹಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ. ಚಂದ್ರಶೇಖರ್ | ಸ್ಥಳೀಯ ನಾಗರೀಕರು | ಕಂದಾಯ ಪರಿವೀಕ್ಷಕರು |
| 6 | ಶ್ರೀ. ಸತ್ಯ ನಾರಾಯಣ | ಸ್ಥಳೀಯ ನಾಗರೀಕರು | ಸಹಾಯಕ ಕಂದಾಯ ಅಧಿಕಾರಿ |
| 7 | ಶ್ರೀ. ಕೆ. ನಾಗೇಶ್ | ಸ್ಥಳೀಯ ನಾಗರೀಕರು | ಪೋಲಿಸ್ ಇಲಾಖೆ, ಸಂಚಾರಿ ಮತ್ತು ಕಾನೂನು ಸುವ್ಯವಸ್ಥೆ |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.

2. **ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ಚರ್ಚಿಸಿದ ವಿಷಯಗಳು:**

| ಕ್ರ ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | ಮಾನ್ಯ ಆಡಳಿತ ಅಧಿಕಾರಿಗಳ ಆದೇಶದನ್ವಯ 2021-22 ನೇ ಸಾಲಿನ ಅಯವ್ಯಯದಲ್ಲಿ ಸಿದ್ಧತೆ ಪೂರ್ವದಲ್ಲಿ ವಾರ್ಡ್ ಕಮಿಟಿ ಸದಸ್ಯರು ಹಾಗೂ ಸಾರ್ವಜನಿಕರು ಸಲಹೆ ಸೂಚನೆ ನೀಡುವ ಬಗ್ಗೆ. | ಈ ಬಗ್ಗೆ ವಾರ್ಡ್ ಕಮಿಟಿ ಸದಸ್ಯರು ಹಾಗೂ ಸಾರ್ವಜನಿಕರೊಂದಿಗೆ ಚರ್ಚಿಸಲಾಗಿ 2021-22ನೇ ಸಾಲಿನ ಅಯವ್ಯಯದಲ್ಲಿ ಈ ಕೆಳಕಂಡ ಅಂಶಗಳನ್ನು ಅಳವಡಿಸಿಕೊಳ್ಳಲು ಸಲಹೆ ನೀಡಿರುತ್ತಾರೆ.<br>1. Potholes ಮುಕ್ತ ರಸ್ತೆ ನಿರ್ಮಾಣ ಮಾಡುವ ಬಗ್ಗೆ.<br>2. ಘನತ್ಯಾಜ್ಯ ಸಮರ್ಪಕವಾಗಿ ನಿರ್ವಹಿಸುವ ಬಗ್ಗೆ.<br>3. ವಾರ್ಡ್ ವ್ಯಾಪ್ತಿಯಲ್ಲಿ ಹೂಳು ತುಂಬಿರುವ ರಸ್ತೆಬದಿ ಚರಂಡಿ ದುರಸ್ಥಿಗೊಳಿಸುವ ಬಗ್ಗೆ.<br>4. ಹಾಳಾಗಿರುವ ರಸ್ತೆ ಮತ್ತು ಫುಟ್‌ಪಾತ್‌ಗಳಿಗೆ ದುರಸ್ಥಿ ಕಾಮಗಾರಿಗಳು ಕೈಗೊಳ್ಳುವ ಬಗ್ಗೆ. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಿಕ್ಕಪೇಟೆ, ಸಹಾಯಕ ಅಭಿಯಂತರರು ವಾರ್ಡ್:109 |

Scanned by CamScanner

| | | | |
|---|---|---|---|
| 2 | ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಸಮರ್ಪಕವಾಗಿ ನಿರ್ವಹಣೆ ಆಗದಿರುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸದಿರುವ ಬಗ್ಗೆ ಸ್ಥಳೀಯ ಮುಖಂಡರು ಹಾಗೂ ಸದಸ್ಯರು ಸಭೆಯಲ್ಲಿ ದೂರು ನೀಡಿದರು. ಈ ಬಗ್ಗೆ ಅಧ್ಯಕ್ಷರು ಪರಿಶೀಲಿಸಿದಾಗ ಈ ಕೆಳಕಂಡ ಅಂಶಗಳ ಬಗ್ಗೆ ಕ್ರಮವಹಿಸುವಂತೆ ತಿಳಿಸಿದರು.<br>1. ವಾರ್ಡ್ ವ್ಯಾಪ್ತಿಗೆ ಘನತ್ಯಾಜ್ಯ ನಿರ್ವಹಣೆಗಾಗಿ ಕಾರ್ಯಾದೇಶದಲ್ಲಿ ನಿಗದಿಪಡಿಸಿರುವ ಕಡಿಮೆ Auto Tipper ಗಳು ಕಾರ್ಯನಿರ್ವಹಿಸುತ್ತಿರುವ ಬಗ್ಗೆ.<br>2. ಪ್ರತಿನಿತ್ಯ ಸಾರ್ವಜನಿಕರು ಹಸಿತ್ಯಾಜ್ಯ ಒಣತ್ಯಾಜ್ಯ ವಿಂಗಡಣೆ ಮಾಡಿ ನೀಡಿದ್ದರು ಪೌರ ಕಾರ್ಮಿಕರು ಮತ್ತು Auto Tipper ಚಾಲಕರು ಹಸಿತ್ಯಾಜ್ಯ ಒಣತ್ಯಾಜ್ಯ ಒಟ್ಟಾಗಿ ಸಂಗ್ರಹಿಸುತ್ತಿರುವ ಬಗ್ಗೆ.<br>3. ಪ್ರತಿನಿತ್ಯ ಖಾಯಂ ಪೌರ ಕಾರ್ಮಿಕರು Gangwork ನಿರ್ವಹಿಸದಿರುವ ಬಗ್ಗೆ ದೂರು ನೀಡಿದ ಹಿನ್ನಲೆಯಲ್ಲಿ ಈ ಬಗ್ಗೆ ಅಗತ್ಯ ಕ್ರಮವಹಿಸುವಂತೆ ಅಧ್ಯಕ್ಷರು ಸೂಚಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ವಿಭಾಗ |
| 3 | ವಾರ್ಡ್ ವ್ಯಾಪ್ತಿಯಲ್ಲಿ ಅನಧೀಕೃತವಾಗಿ ವಾಣಿಜ್ಯ ಚಟುವಟಿಕೆಗಳನ್ನು ತಡೆಗಟ್ಟುವ ಬಗ್ಗೆ | ಈ ಬಗ್ಗೆ ಸಭೆಯಲ್ಲಿ ಅನಧೀಕೃತವಾಗಿ ವಾಣಿಜ್ಯ ಚಟುವಟಿಕೆಗಳು ಹೆಚ್ಚಾಗುತ್ತಿರುವುದರಿಂದ ವಾರ್ಡ್ ವ್ಯಾಪ್ತಿಯಲ್ಲಿ ವಾಣಿಜ್ಯ ಚಟುವಟಿಕೆಗಳಿಂದ ಉತ್ಪತ್ತಿಯಾಗುತ್ತಿರುವ ತ್ಯಾಜ್ಯ ಹೆಚ್ಚಾಗುತ್ತಿದ್ದು ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಸಂಚಾರ ದಟ್ಟಣೆ ಉಂಟಾಗುತ್ತಿರುವುದರಿಂದ ವಾಣಿಜ್ಯ ಚಟುವಟಿಕೆಗಳಿಗೆ ಸಂಬಂಧಪಟ್ಟಂತೆ ಟ್ರೇಡರ್ಸ್ ಅಸೋಸಿಯೇಷನ್ ರವರೊಂದಿಗೆ ಸಭೆಯನ್ನು ನಿಗಧಿಪಡಿಸುವಂತೆ ಸೂಚಿಸಲಾಯಿತು. | ಆರೋಗ್ಯ ವೈಧ್ಯಾಧಿಕಾರಿ (ಚಿಕ್ಕಪೇಟೆ) |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

Scanned by CamScanner

ಪ್ರತಿಯನ್ನು:-

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 109 ಚಿಕ್ಕಪೇಟೆ ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಚಿಕ್ಕಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ರವರ ಅವಗಾಹನೆಗೆ ಸಲ್ಲಿಸಿದೆ.
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ರವರ ಅವಗಾಹನೆಗೆ ಸಲ್ಲಿಸಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ರಾಜಕಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಆರೋಗ್ಯ ವೈದ್ಯಾಧಿಕಾರಿ, ಚಿಕ್ಕಪೇಟೆ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ರವರಿಗೆ ಸಭೆಗೆ ಹಾಜರಾಗಲು ತಿಳಿಸಿದೆ.
13. ಸಹ ಕಂದಾಯ ಅಧಿಕಾರಿ, ಚಾಮರಾಜಪೇಟೆ ಉಪವಿಭಾಗ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ
14. ಪೊಲೀಸ್ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಕಾಟನ್‌ಪೇಟೆ ಪೊಲೀಸ್ ಠಾಣೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
15. ಆರಕ್ಷಕ ನಿರೀಕ್ಷಕರು, ಉಪ್ಪಾರ್‌ಪೇಟೆ ಸಂಚಾರಿ ವಿಭಾಗ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
16. ವಾರ್ಡ್ ಸಂಖ್ಯೆ: 109 ಚಿಕ್ಕಪೇಟೆ ವಾರ್ಡ್ ಕಮಿಟಿ ಸದಸ್ಯರು ರವರುಗಳಿಗೆ ಸಭೆಗೆ ಹಾಜರಾಗಲು ತಿಳಿಸಿದೆ.

Scanned by CamScanner